**O.S.No.4/2022 PW.1**

ದಿಃ **08-12-2022** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ : ವಾದಿ ಪರ ವಕೀಲರಾದ ಶ್ರೀ ಎನ್ ಎಸ್ ಜಿ ರವರಿಂದ:

ನಾನು ಈ ದಾವೆಯಲ್ಲಿ ವಾದಿಯಾಗಿರುತ್ತೇನೆ. ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣಪತ್ರ ಸಲ್ಲಿಸಿರುತ್ತೇನೆ ಸದರಿ ಪ್ರಮಾಣಪತ್ರದಲ್ಲಿ ಬರೆದಿರುವ ಸಂಗತಿಗಳು ನಿಜ ಇವೆ. ಸದರಿ ಪ್ರಮಾಣ ಪತ್ರವನ್ನು ಬರೆಯಲು ನಾನೇ ವಕೀಲರಿಗೆ ಮಾಹಿತಿ ನೀಡಿರುತ್ತೇನೆ ನಂತರ ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ದಾವಾ ಸ್ವತ್ತಿಗೆ ಸಂಬಂಧಿಸಿದ ಉತಾರೆಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-1 ಎಂದು, ದಿಃ 10-11-2020 ರಂದು ನಬಾಪುರ ಗ್ರಾಮದ ಕುಂಬಾರ ಓಣಿಯ ನಾಗರೀಕರು ಗ್ರಾಮ ಪಂಚಾಯಿತಿ ಅಧ್ಯಕ್ಷರವರಿಗೆ ನೀಡಿದ ಪತ್ರವನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-2 ಎಂದು, ನಬಾಪುರ ಗ್ರಾಮದ ಕುಂಬಾರ ಓಣಿಯ ನಾಗರೀಕರು ಗ್ರಾಮ ಪಂಚಾಯಿತಿ ಅಧಿಕಾರಿಗಳು ಖನಗಾಂವರವರಿಗೆ ನೀಡಿದ ಪತ್ರವನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-3 ಎಂದು, ನಬಾಪುರ ಗ್ರಾಮದ ಕುಂಬಾರ ಓಣಿಯ ನಾಗರೀಕರು ಕಾರ್ಯ ನಿರ್ವಾಹಕ ಅಧಿಕಾರಿ ಗೋಕಾಕರವರಿಗೆ ನೀಡಿದ ಪತ್ರವನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-4 ಎಂದು, ದಿಃ 03-11-2011 ರಂದು ನಾನು ನನ್ನ ವಕೀಲರ ಮೂಲಕ 1) ಜಿಲ್ಲಾಧಿಕಾರಿಗಳು ಬೆಳಗಾವಿ, 2) ಕಾರ್ಯದರ್ಶಿಗಳು ಜಿಲ್ಲಾ ಪಂಚಾಯಿತಿ ಬೆಳಗಾವಿ, 3) ತಾಲೂಕಾ ಕಾರ್ಯ ನಿರ್ವಾಹಕ ಅಧಿಕಾರಿ ಗೋಕಾಕ, 4) ಪಿ.ಡಿ.ಓ ಖನಗಾಂವ, 5) ಕಾರ್ಯ ನಿರ್ವಾಹಕ ಅಭಿಯಂತರರು (ವಿ) ಕಾರ್ಯ ಮತ್ತು ಪಾಲನೆ ವಿಭಾಗ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ಘಟಪ್ರಭಾ 6) ಸೆಕ್ಷನ್ ಆಫೀಸರ್ ಖನಗಾಂವ ವಿಭಾಗ ರವರಿಗೆ ನೀಡಿದ ನೋಟೀಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-5 ಎಂದು, ನಿಪಿ-5 ಕಳುಹಿಸಿರುವ ಕುರಿತು 6 ಅಂಚೆ ರಶೀದಿಗಳನ್ನು ಹಾಜರುಪಡಿಸಿರುತ್ತೇನೆ ಅವುಗಳನ್ನು ಕ್ರಮವಾಗಿ ನಿಪಿ-6 ರಿಂದ 11 ಎಂದು, 6 ತಲುಪೋಪ್ಪಿಗೆ ಪತ್ರಗಳನ್ನು ಹಾಜರುಪಡಿಸಿರುತ್ತೇನೆ ಅವುಗಳನ್ನು ಕ್ರಮವಾಗಿ ನಿಪಿ-12 ರಿಂದ 17 ಎಂದು, ದಿಃ 16-11-2021 ರಂದು ಜಿಲ್ಲಾಧಿಕಾರಿಗಳು ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯಿತಿರವರಿಗೆ ನೀಡಿದ ಪತ್ರವನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-18 ಎಂದು, ಕಾರ್ಯ ನಿರ್ವಹಾಕ ಅಭಿಯಂತರರು (ವಿ) ಕಾರ್ಯ ಮತ್ತು ಪಾಲನೆ ವಿಭಾಗ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ಘಟಪ್ರಭಾ ರವರು ಸಹಾಯಕ ಕಾರ್ಯ ನಿರ್ವಹಾಕ ಅಭಿಯಂತರರು (ವಿ) ಕಾರ್ಯ ಮತ್ತು ಪಾಲನೆ ಉಪ ವಿಭಾಗ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ಗೋಕಾಕ ರವರಿಗೆ ನೀಡಿದ ಪತ್ರವನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-19 ಎಂದು, ನಾನು ಕೆ ಎಲ್ ಇ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುವ ಕುರಿತು ವೈದ್ಯಕೀಯ ದಾಖಲಾತಿಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-20 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯವಿಚಾರಣೆಗೆ ಸಮಯಾವಕಾಶ ಕೋರಿದ್ದರಿಂದ ನೀಡಲಾಯಿತು.

(ಸಾಕ್ಷಿಯ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೆ. ಕೇ. ಸರಿ ಇದೆ,

(ರಾಜೀವ ಗೋಳಸಾರ)
ಪ್ರ.ದಿ.&ನ್ಯಾದಂ., ಗೋಕಾಕ.